## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.926/2018

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ರಂಗಪ್ಪ ಕೆ. | CW: 20 | PW: 9 |
| ತಂದೆಯ ಹೆಸರು | : | ಹನುಮಂತಪ್ಪ ಕೆ. | | |
| ವಯಸ್ಸು | : | 47 | | |
| ವೃತ್ತಿ | : | ಹೆಚ್.ಸಿ. ನ್ಯಾಮತಿ ಪೊಲೀಸ್ ಠಾಣೆ | | |
| ವಾಸಸ್ಥಳ | : | ನ್ಯಾಮತಿ | | |

ದಿನಾಂಕಃ 10.07.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ-

ನಾನು 2017 ರಿಂದ 2020 ಹಾಗೂ ಮೇ 2026 ರಿಂದ ಇಲ್ಲಿಯ ತನಕ ನ್ಯಾಮತಿ ಪೊಲೀಸ್ ಠಾಣೆಯಲ್ಲಿ ಹೆಚ್.ಸಿ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 27.06.2018 ರಂದು ನಾನು ಠಾಣಾ ಪ್ರಭಾರ ಕರ್ತವ್ಯದಲ್ಲಿ ಇದ್ದಾಗ, ರಾತ್ರಿ 11.00 ಗಂಟೆ ಸಮಯದಲ್ಲಿ ಚಾಸಾ - 1 ರವರು ಠಾಣೆಗೆ ಹಾಜರಾಗಿ ಗಣಕೀಕೃತ ದೂರನ್ನು ನೀಡಿದ್ದು , ನಾನು ಸದರಿ ದೂರನ್ನು ಸ್ವೀಕರಿಸಿ, ಠಾಣಾ ಗುನ್ನೆ ನಂ.120/2018 ರಂತೆ ಪ್ರಕರಣವನ್ನು ದಾಖಲಿಸಿ, ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಪ್ರತಿಯನ್ನು

ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ 21 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನಿಪಿ 1 ದೂರಿನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 1(ಬಿ) ಎಂದು ಗುರುತಿಸಲಾಯಿತು. ಎಫ್ ಐ ಆರ್ ನ್ನು ನಿಪಿ.9 ಎಂದು, ಸಾಕ್ಷಿಯ ಸಹಿಯನ್ನು ನಿಪಿ 9(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ- ಆರೋಪಿಗಳ ಪರ ಶ್ರೀ.ಎಂ.ಆರ್.ಎಂ. ವಕೀಲರಿಂದಃ-

ಚಾಸಾ.1 ರವರು ನಮ್ಮ ಮೇಲಾಧಿಕಾರಿಗಳು ಎಂದರೆ ಸರಿ. ಸುಳ್ಳು ದೂರು ಸ್ವೀಕರಿಸಿ, ಸುಳ್ಳು ಎಫ್ಐಆರ್ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗಳಿಗೂ ಈ ಪ್ರಕರಣಕ್ಕೂ ಸಂಬಂಧ ಇಲ್ಲ ಎಂದರೆ ಸರಿ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.